ಸಂಯುಕ್ತ ಕರ್ನಾಟಕ







ಹಾವೇರಿ ತಾಲೂಕಿನ ಹೊಸರಿತ್ತಿ ಗ್ರಾಮದ ಗಾಂಧಿ ಗ್ರಾಮೀಣ ಗುರುಕುಲದಲ್ಲಿ ಏರ್ಪಡಿಸಿದ್ದ ಗುದ್ಲೆಪ್ಪ ಹಳ್ಳಿಕೇರಿ ಅವರ 119ನೇ ಜಯಂತಿ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು. 2) ಹಾವೇರಿ ತಾಲೂಕಿನ ಹೊಸರಿತ್ತಿಯ ಗಾಂಧಿ ಗ್ರಾಮೀಣ ಗುರುಕುಲದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಪ್ರಸಕ್ತ ವರ್ಷದ ಗುದ್ಲೆಪ್ಪ ಹಳ್ಳಿಕೇರಿ ಸೇವಾ ಗೌರವ ಪ್ರಶಸ್ತಿಯನ್ನು ಸಾಹಿತಿ ಸಿದ್ದಲಿಂಗ ಪಟ್ಟಣಶೆಟ್ಟಿ ಅವರಿಗೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

### ಗುದ್ಲೆಪ್ಪ ಹಳ್ಳಿಕೇರಿ ಸೇವಾ ಗೌರವ ಪ್ರಶಸ್ತಿ ಪ್ರದಾನ ಸಮಾರಂಭ । ವಿ.ಪ. ಸಭಾಪತಿ ಬಸವರಾಜ ಹೊರಟ್ಟಿ ಕಳವಳ

# ಶಿಕ್ಷಕ, ಬುದ್ಧಿಜೀವಿ ಭ್ರಷ್ಟರಾದರೆ ದೇಶ ಅಧೋಗತಿ

**ಹಾವೇರಿ:** ಹಿಂದಿನ ರಾಜಕಾರಣಕ್ಕೂ ಪ್ರಸ್ತುತ ರಾಜಕಾರಣಕ್ಕೂ ಸಾಕಷ್ಟು ವ್ಯತ್ಯಾಸವಿದೆ. ಗುದ್ಲೆಪ್ಪ ಹಳ್ಳಿಕೇರಿ ಅವರಂತ ಮಹಾನ್ ವ್ಯಕ್ತಿಗಳ ಮಾರ್ಗದರ್ಶನದಲ್ಲಿ ಸಾಗಿದರೆ ಈ ದೇಶ ಉತ್ತಮ ರೀತಿಯಲ್ಲಿ ಮುನ್ನಡೆಯುತ್ತದೆ. ಇಲ್ಲದಿದ್ದರೆ ಕಷ್ಟದ ಹಾದಿಯಲ್ಲಿ ಮುನ್ನಡೆಯಬೇಕಾಗುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ತಾಲೂಕಿನ ಹೊಸರಿತ್ತಿ ಗ್ರಾಮದ ಗಾಂಧಿ ಗ್ರಾಮೀಣ ಗುರುಕುಲದಲ್ಲಿ ಗುರುವಾರ ಗುದ್ಲೆಪ್ಪ ಹಳ್ಳಿಕೇರಿ ಅವರ 119ನೇ ಜಯಂತಿ ಮತ್ತು ಗುದ್ಲೆಪ್ಪ ಹಳ್ಳಿಕೇರಿ ಸೇವಾ ಗೌರವ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಗುದ್ಲೆಪ್ಪ ಹಳ್ಳಿಕೇರಿಯವರು ಸಭಾಪತಿ ಆದ ಸಂದರ್ಭದಲ್ಲಿ ಉತ್ತಮ ರೀತಿಯಲ್ಲಿ ತಮ್ಮ ಸ್ಥಾನ ನಿರ್ವಹಿಸಿದ್ದಾರೆ. ಹಲವಾರು ಹೋರಾಟ, ಚಳವಳಿ ನಡೆಸಿ ಜೈಲುವಾಸ ಅನುಭವಿಸಿ ಮಹಾನ್ ವ್ಯಕ್ತಿಗಳಾಗಿ ಲಕ್ಷಾಂತರ ಮಕ್ಕಳಿಗೆ ಆಸರೆಯಾಗುವಂತ ಗುರುಕುಲ ನಿರ್ಮಾಣ ಮಾಡಿರುವುದು ಶ್ಲಾಘನೀಯ ಎಂದರು.

ಬಂದಿದೆ. ಗುರುಕುಲ ಅಭಿವೃದ್ಧಿಗಾಗಿ ಪ್ರಾಮಾಣಿಕ ಪ್ರಯತ್ನ ಮಾಡಿ ಸಮಸ್ಯೆಗಳನ್ನು ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಪ್ರಸಕ್ತ ವರ್ಷದ ಗುದ್ಲೆಪ್ಪ ಹಳ್ಳಿಕೇರಿ ಸೇವಾ ಗೌರವ ಪ್ರಶಸ್ತಿಯನ್ನು ಸಾಹಿತಿ ಸಿದ್ದಲಿಂಗ ಪಟ್ಟಣಶೆಟ್ಟಿ ಅವರಿಗೆ ಪ್ರದಾನ ಮಾಡಿ ಸನ್ಮಾನಿಸಿ ಗೌರವಿಸಲಾಯಿತು.

ಪ್ರಶಸ್ತಿ ಸ್ವೀಕರಿಸಿದ ಸಾಹಿತಿ ಸಿದ್ದಲಿಂಗ ಪಟ್ಟಣಶೆಟ್ಟಿ ಮಾತನಾಡಿ, ಜಾತಿಬೇಧ ಎನ್ನದೆ ಹಲುವಾರು ಜನರ ಸಮಸ್ಯೆಗಳನ್ನು ಬಗೆಹರಿಸಲು ನಿರಂತರವಾಗಿ ಶ್ರಮಪಡುವ ಏಕೈಕ ವ್ಯಕ್ತಿ ಗುದ್ಲೆಪ್ಪನವರು ಎಂದರು.

ಈಗಿನ ಕಾಲದಲ್ಲಿ ಜಾತಿ, ಹಣ, ಲಂಚಕ್ಕೆ ಕೈಚಾಚಿ ಸಮಸ್ಯೆಗಳನ್ನು ಬಗೆಹರಿಸುವವರ ಸಂಖ್ಯೆ ಜಾಸ್ತಿಯಾಗಿದೆ. ದೇಶದ ಜನರ ಮೇಲೆ ಅಪಾರ ಪ್ರೀತಿ ಹೊಂದಿದ್ದ ಗುದ್ಲೆಪ್ಪನವರು ತಮ್ಮನ್ನು ಭೇಟಿ ಮಾಡಿ ತಮ್ಮ ಸಮಸ್ಯೆಗಳನ್ನು ಬಗೆಹರಿಸಿದ ಸಂದರ್ಭಗಳನ್ನು ಮೆಲುಕು ಹಾಕಿದರು. ಬಡವರ ಬಗ್ಗೆ

> “ಗುದ್ಲೆಪ್ಪ ಹಳ್ಳಿಕೇರಿಯವರು ಮಾಡಿದ ಕಾರ್ಯಗಳು ಮತ್ತು ಹೋರಾಟಗಳ ಬಗ್ಗೆ ಮಕ್ಕಳಿಗೆ ನೆನೆಪು ಮಾಡುವಂತ ಕೆಲಸ ಮಾಡಬೇಕಿದೆ. ಅಂತಹ ಮಹಾನ್ ವ್ಯಕ್ತಿಯನ್ನು ನಮ್ಮ ರಾಜ್ಯ ಪಡೆದಿರುವುದು ನಮ್ಮ ಭಾಗ್ಯ. ಅಂತಹ ಶ್ರೇಷ್ಠ ವ್ಯಕ್ತಿಗಳ ಬಗ್ಗೆ ಮಕ್ಕಳಿಗೆ ಮನಮುಟ್ಟುವಂತೆ ತಿಳಿಸುವ ಕಾರ್ಯವನ್ನು ಶಿಕ್ಷಕರು ಮಾಡಬೇಕು.
>
> । -ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸಭಾಪತಿ.

> “ಗುರುಕುಲದಲ್ಲಿ ಶಿಕ್ಷಣ ಪಡೆದವರು ಪುಣ್ಯವಂತರು. ಮಕ್ಕಳಿಗೆ ಪಾಲಕರು ಉತ್ತಮ ಶಿಕ್ಷಣ ನೀಡಿ ವಿಜ್ಞಾನ ವಿಭಾಗದಲ್ಲಿ ಜೀವಶಾಸ್ತ್ರ ವಿಷಯವನ್ನು ಮಕ್ಕಳು ಆಯ್ದುಕೊಳ್ಳಬೇಕು. ರೈತರ ಮಕ್ಕಳಿಗೆ ಕೃಷಿ ವಿಶ್ವವಿದ್ಯಾಲಯದಲ್ಲಿ ಪ್ರವೇಶ